## ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ.1934/2024

ಸಾಕ್ಷಿಗೆ ದಿನಾಂಕ 24-10-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 3 P.W.: 2

| | | |
|---|---|---|
| ಹೆಸರು | : | ಗಜೇಂದ್ರ |
| ತಾಯಿಯ ಹೆಸರು | : | ಮಾಯಮ್ಮ |
| ವಯಸ್ಸು | : | 34 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ನೆಲ್ಲುಕುದುರೆ ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ನನಗೆ ಆರೋಪಿ ಪರಿಚಯ ಇಲ್ಲ. ಸಾಕ್ಷಿಗೆ ನಿಪಿ-1 ದಾಖಲೆ ತೋರಿಸಲಾಗಿ ಅದು ಪಂಚನಾಮೆಯಾಗಿದ್ದು ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಸದರಿ ಸಾಕ್ಷಿಯ ಸಹಿಯನ್ನು ನಿಪಿ-1 ಬಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ-2 ರ ದಾಖಲೆ ತೋರಿಸಲಾಗಿ ಅದು ನಕಾಶೆಯಾಗಿದ್ದು ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-2 ಬಿ ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಿಗೆ ನಾನು ಈಗೆ 2 ತಿಂಗಳ ಹಿಂದೆ ಇಟಿಗಿ ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಗಳಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ, ಯಾವುದೇ ವ್ಯಕ್ತಿಯನ್ನು ದಸ್ತಗಿರಿ ಮಾಡಿಲ್ಲ, ಯಾವುದೇ ಮು ಮಾಲುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಸಾಕ್ಷಿಗೆ ಮು ಮಾಲುಗಳ ಮೇಲೆ ಅಂಟಿಸಿರುವ ಚೀಟಿ ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ಗುರುತಿಸಿರುತ್ತಾರೆ. ಸದರಿ ಮು ಮಾಲುಗಳ ಚೀಲದಲ್ಲಿ ಏನಿದೆ ಎಂದು ನನಗೆ ಗೊತ್ತಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ದಿಃ 20-11-2024 ರಂದು ಸಂಜೆ 3.10 ರಿಂದ 4.10 ರವರೆಗೆ ಇಟಿಗಿ ಪೋಲೀಸರು ಘಟನಾ ಸ್ಥಳದಲ್ಲಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಪಂಚನಾಮೆ ಜರುಗಿಸಿ, ಆರೋಪಿತನಿಂದ 60 ಮಿಲಿಯ ಹೈವಾರ್ಡ್ಸ್ ಚಿಯರ್ಸ ವಿಸ್ಕಿಯ 37 ಮದ್ಯ ತುಂಬಿದ ಟೆಟ್ರಾ

ಪ್ಯಾಕೆಟ್ಟುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಜರುಗಿಸಿ, ನಿಪಿ-2 ರಂತೆ ನಕಾಶೆ ತಯಾರಿಸಿರುತ್ತಾರೆ ಅದರಲ್ಲಿ ಬರೆದಿರುವ ವಿಚಾರವನ್ನು ತಿಳಿದುಕೊಂಡು ನಾನು ಮತ್ತು ಚಾಸಾ-2 ರವರು ಸೇರಿ ಸದರಿ ದಾಖಲೆಗಳಿಗೆ ಸಹಿ ಮಾಡಿರುತ್ತೇವೆಂದರೆ ಸರಿಯಲ್ಲ. ಆ ಸಮಯದಲ್ಲಿ ಪೋಲೀಸರು ಆರೋಪಿತನನ್ನು ದಸ್ತಗಿರಿ ಮಾಡಿರುತ್ತಾರೆಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಮು ಮಾಲುಗಳನ್ನು ಆ ದಿನ ಪೋಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ